**<u>ದಿನಾಂಕ 02.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಪಾಟೀ ಸವಾಲುಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ .</u>**

ಅಪಘಾತವನ್ನು ನಾನು ಕಣ್ಣಾರೆ ನೋಡಿರುವುದಿಲ್ಲ. ಪೊಲೀಸ್ ದಾಖಲಾತಿಗಳ ಆಧಾರದ ಮೇರೆಗೆ ಸಾಕ್ಷ್ಯ ನುಡಿಯುತ್ತಿದ್ದೇನೆ. ಅಪಘಾತವಾದ ದಿನಾಂಕದಂದು ದ್ವಿಚಕ್ರ ವಾಹನದ ಸವಾರ ಮತ್ತು ಹಿಂಬದಿ ಸವಾರ ಹೆಲ್ಮೆಟ್ ಧರಿಸಿದ್ದರು ಎಂದರೆ ಸರಿಯಲ್ಲ. ದ್ವಿಚಕ್ರ ವಾಹನದ ಸವಾರ ರಸ್ತೆಯ ಎಡಭಾಗದಲ್ಲಿ ನಿಯಮಾನುಸಾರವಾಗಿ ಹೋಗುತ್ತಿದ್ದನು ಎಂದರೆ ಸರಿಯಲ್ಲ. ಸದರಿ ದ್ವಿಚಕ್ರ ವಾಹನದ ಸವಾರ ವೀಲಿಂಗ್ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ಆಪಾದಿತ ವಾಹನ ಎಡಭಾಗದಲ್ಲಿ ಹೋಗುತ್ತಿದ್ದಲ್ಲಿ ಅಪಘಾತವಾಗುತ್ತಿರಲಿಲ್ಲ ಎಂದರೆ ಸರಿಯಲ್ಲ. ಆಪಾದಿತ ವಾಹನ ತನ್ನ ಮಾರ್ಗ ಬದಲಾಯಿಸಿ ಬಲಭಾಗಕ್ಕೆ ಬಂದು ಅಪಘಾತಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಆಪಾದಿತ ವಾಹನದ ಚಾಲಕನ ತಪ್ಪಿ ನಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಆಪಾದಿತ ವಾಹನದ ಚಾಲಕನ ವಿರುದ್ದ ಅಂತಿಮ ವರದಿ ಸಲ್ಲಿಸಿರುತ್ತಾರೆ ಎಂದರೆ ಸಾಕ್ಷಿಯು ತಪ್ಪಾಗಿ ಸಲ್ಲಿಸಿರುತ್ತಾರೆ ಎಂದು ನುಡಿಯುತ್ತಾರೆ. ನಮ್ಮ ಕಂಪನಿಯ ವತಿಯಿಂದ 1ನೇ ಎದುರುದಾರರಿಗೆ ನೋಟೀಸು ನೀಡಿದ್ದು, ಅವರು ಯಾವುದೇ ಪ್ರತಿಕ್ರಿಯೆ ನೀಡಿರುವುದಿಲ್ಲ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿರುವುದಿಲ್ಲ. ನೋಟೀಸು ನೀಡದೇ ಇರುವ ಕಾರಣ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಆಪಾದಿತ ವಾಹನದ ಮುಂಭಾಗ ಹೆಚ್ಚಾದ ಗೇಜ್ ಇರುವ ಕಾರಣ ಅದು ಡಿಕ್ಕಿಪಡಿಸಿದರೂ ಸಹ ಯಾವುದೇ ಜಖಂ ಗಳು ಕಂಡುಬಂದಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಮಹಜರ್ ಬಗ್ಗೆ ತಿಳಿದುಕೊಂಡಿಲ್ಲ. ಆಪಾದಿತ ವಾಹನದ ಚಾಲಕನ

ತಪ್ಪಿ ನಿಂದ ಅಪಘಾತವಾಗಿದ್ದರೂ ಸಹ ಪರಿಹಾರ ಪಾವತಿಸುವುದನ್ನು ತಪ್ಪಿ ಸಿಕೊಳ್ಳಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ದ್ವಿಚಕ್ರ ವಾಹನದ ಚಾಲಕನ ಅಥವಾ ಹಿಂಬದಿ ಸವಾರನ ಅಜಾಗರೂಕತೆ ಇರುವುದಿಲ್ಲ ಎಂದರೆ ಸರಿಯಲ್ಲ. ನಿಪಿ 7 ರಲ್ಲಿ ಆಪಾದಿತ ವಾಹನದ ಜಖಂ ಗಳು ಪ್ರಸ್ತುತ ಪ್ರಕರಣದ ಅಪಘಾತಕ್ಕೆ ಸಂಬಂಧಿಸಿದಂತೆ ಆದ ಜಖಂ ಗಳು ಅಲ್ಲ ಎಂದರೆ ಸರಿಯಲ್ಲ. ಪ್ರಮಾಣ ಪತ್ರ ಖಂಡಿಕೆ 2 ಮತ್ತು 3 ರಲ್ಲಿ ಹೇಳಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**